# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 07-08-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು**

1. ಮೊಹಮ್ಮದ್ ಶಬ್ಬೀರ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್,
2. ಶ್ರೀ ಫಕೃದ್ದೀನ್, ಬೆಸ್ಕಾಂ ಇಲಾಖೆ
3. ಶ್ರೀ ಶೇಕ್ ಅನ್ವರ್, ಎ.ಎಸ್.ಐ ಪುಲಿಕೇಶಿನಗರ ಪೊಲೀಸ್ ಠಾಣೆ
4. ಶ್ರೀ ಪಾಷಾ, ಸ್ಥಳೀಯರು,
5. ಶ್ರೀ/ಶ್ರೀಮತಿ ರೋಸಿತಾ, ಸ್ಥಳೀಯರು,
6. ಶ್ರೀ ಎ.ಆರ್.ಸುರೇಶ್, ಸ್ಥಳೀಯರು,
7. ಶ್ರೀಮತಿ ಸುಮಂಗಳಾ.ವಿ, ಸ್ಥಳೀಯರು,
8. ಶ್ರೀ ಜಿ.ವಿ.ನಾಗರಾಜ್, ಸ್ಥಳೀಯರು,
9. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) ಮಾರುತಿಸೇವಾನಗರ ವ್ಯಾಪ್ತಿಯ ಹಚ್ಚಿನ್ಸ್ ಪಾರ್ಕ್‌ನಲ್ಲಿ ಬೆಂಚ್‌ಗಳನ್ನು ಹಾಕಲಾಗಿರುತ್ತದೆ ಮತ್ತು ಹೆಚ್ಚುವರಿ ಬೆಂಚ್‌ಗಳನ್ನು ಆಟದ ಪ್ರದೇಶದಲ್ಲಿ ಅಳವಡಿಸಲು ಹಾಗೂ ಪಾರ್ಕಿನಲ್ಲಿ ಮಕ್ಕಳ ಆಟದ ಮೈದಾನವನ್ನು ನಿರ್ಮಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಗೆ ತಿಳಿಸಿದರು.

2) ಮಾರುತಿಸೇವಾನಗರ ವ್ಯಾಪ್ತಿಯಲ್ಲಿ ತೋಟಗಾರಿಕಾ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ವಿವರಗಳನ್ನು ಮುಂದಿನ ಸಭೆಗೆ ಸಲ್ಲಿಸಲು ಸ್ಥಳೀಯರು ಕೋರಿದರು.

3) ಮಾರುತಿಸೇವಾನಗರ ವ್ಯಾಪ್ತಿಯ ಬಾಣಸವಾಡಿ ಮುಖ್ಯರಸ್ತೆ, ಮಚಲಿ ಬೆಟ್ಟ, ಐ.ಟಿ.ಸಿ ಫ್ಯಾಕ್ಟರಿ ಮುಂಭಾಗ ಬೆಸ್ಕಾಂ ಇಲಾಖೆಯಿಂದ ಗುಂಡಿಯನ್ನು ಅಗೆಯಲಾಗಿದ್ದು, ಇದರಿಂದ ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಸದರಿ ಪ್ರದೇಶದಲ್ಲಿ ಅಗೆದಿರುವ ರಸ್ತೆ ಗುಂಡಿಯನ್ನು ಬೆಸ್ಕಾಂ ಇಲಾಖೆಯಿಂದ ಕೂಡಲೇ ಮುಚ್ಚಲು ಕ್ರಮ ವಹಿಸಲು ಸೂಚಿಸಿದರು.

4) ಮಾರುತಿಸೇವಾನಗರ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಇಲಾಖೆಯ ಖಾಯಂ ಪೌರಕಾರ್ಮಿಕರ ದಿನನಿತ್ಯದ ಕಾರ್ಯವೈಖರಿಯ ವಿವರವನ್ನು ಮುಂದಿನ ಸಭೆಗೆ ಸಲ್ಲಿಸಲು ಸ್ಥಳೀಯರು ಕೋರಿದರು.

5) ಮಾರುತಿಸೇವಾನಗರ ವ್ಯಾಪ್ತಿಯ ಐ.ಟಿ.ಸಿ ಫ್ಯಾಕ್ಟರಿ ಬ್ರಿಡ್ಜ್ ಮೇಲೆ ಡಾಂಬರೀಕರಣ ಮಾಡಿದ್ದು, ಸದರಿ ಕಾಮಗಾರಿಯ ಸಂಪೂರ್ಣ ವಿವರಗಳನ್ನು ಕಾರ್ಯಪಾಲಕ ಅಭಿಯಂತರರು, ಮೂಲಭೂತ ಸೌಕರ್ಯ ರವರಿಂದ ಪಡೆದು ಮುಂದಿನ ಸಭೆಗೆ ಹಾಜರುಪಡಿಸಲು ಸ್ಥಳೀಯರು ಕೋರಿದರು.

6) ಮಾರುತಿಸೇವಾನಗರ ವ್ಯಾಪ್ತಿಯಲ್ಲಿ ಸಾರ್ವಜನಿಕರು ಕೋವಿಡ್ ಲಸಿಕಾ ಕಾರ್ಯಕ್ರಮದ ಬಗ್ಗೆ ಜನ ಜಾಗೃತಿ ಹೆಚ್ಚಾಗಿದ್ದು, ಪ್ರಸ್ತುತ ವಾರ್ಡಿಗೆ ನೀಡುತ್ತಿರುವ ಲಸಿಕೆಯ ಪ್ರಮಾಣವನ್ನು ಹೆಚ್ಚಿಸಲು ಆರೋಗ್ಯ ವೈದ್ಯಾಧಿಕಾರಿಗಳಿಗೆ ಪ್ರಸ್ತಾಪಿಸಲು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

23/08/2021

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

<u>**ಪ್ರತಿಯನ್ನು**</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.